# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2707 |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 25-03-2022 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಬೆಳೆ ಹಾನಿಯಿಂದ ಎಷ್ಟು ಜನ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. | ಸಾಲ ಬಾಧೆಯಿಂದ ಸಂಭವಿಸಿದ ರೈತರ ಆತ್ಮಹತ್ಯೆ ಪ್ರಕರಣಗಳನ್ನು ಇತ್ಯರ್ಥಪಡಿಸಲು ಉಪವಿಭಾಗ ಮಟ್ಟದಲ್ಲಿ ಉಪ ವಿಭಾಗಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯನ್ನು ರಚಿಸಲಾಗಿದೆ.<br><br>ಶಿವಮೊಗ್ಗ ಜಿಲ್ಲೆಯಲ್ಲಿ ಸಾಲ ಬಾಧೆಯಿಂದ 2018-19ನೇ ಸಾಲಿನಲ್ಲಿ 35 ರೈತರು 2019-20ನೇ ಸಾಲಿನಲ್ಲಿ 40 ರೈತರು ಮತ್ತು 2020-21ನೇ ಸಾಲಿನಲ್ಲಿ 35 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.<br><br>2020-21ನೇ ಸಾಲಿನಿಂದ ಸಾಲಬಾಧೆಯಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಆತ್ಮಹತ್ಯೆ ಪ್ರಕರಣಗಳಿಗೆ ಪರಿಹಾರ ನೀಡುವ ಕಾರ್ಯಕ್ರಮವು ಕಂದಾಯ ಇಲಾಖೆಗೆ ವರ್ಗಾವಣೆಗೊಂಡಿರುತ್ತದೆ. |
| ಆ) | ಆತ್ಮಹತ್ಯೆ ಮಾಡಿಕೊಂಡಹ ರೈತರುಗಳಿಗೆ ಸರ್ಕಾರದಿಂದ ಎಷ್ಟು ಪರಿಹಾರ ನೀಡಲಾಗಿದೆ ? (ಕಳೆದ 3 ವರ್ಷದ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಆತ್ಮಹತ್ಯೆ ಮಾಡಿಕೊಂಡ ರೈತರುಗಳಿಗೆ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯಲ್ಲಿ ಅನುಮೋದನೆಯಾಗಿ ಅರ್ಹ ಪ್ರಕರಣಗಳೆಂದು ಪರಿಗಣಿಸಲಾದ ಎಲ್ಲಾ ಪ್ರಕರಣಗಳಿಗೆ ಪರಿಹಾರ ವಿತರಿಸಲು ಜಿಲ್ಲೆಗಳಿಂದ ಸ್ವೀಕೃತವಾಗಿರುವ ಬೇಡಿಕೆಗೆ ಅನುಗುಣವಾಗಿ ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದೆ.<br><br>ರೈತರ ಆತ್ಮಹತ್ಯೆ ಪ್ರಕರಣಗಳಿಗೆ ತಲಾ ರೂ.5.00 ಲಕ್ಷಗಳ ಪರಿಹಾರ ಒದಗಿಸಲಾಗುತ್ತಿದೆ.<br><br>ಕಳೆದ ಮೂರು ವರ್ಷಗಳ ಪರಿಹಾರ ವಿತರಿಸಲಾದ ಅನುದಾನ ವಿವರ ಈ ಕೆಳಕಂಡಂತಿವೆ;<br><br>**ವರ್ಷ** / **ಆತ್ಮಹತ್ಯೆ ಪ್ರಕರಣಗಳು** / **ಪರಿಹಾರ ಮೊತ್ತ (ರೂ.ಕೋಟಿಗಳಲ್ಲಿ)**<br>2018-19 / 868 / 43.40<br>2019-20 / 884 / 44.20<br>2020-21 / 635 / 31.75 |

| ವರ್ಷ | ಆತ್ಮಹತ್ಯೆ ಪ್ರಕರಣಗಳು | ಪರಿಹಾರ ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| 2018-19 | 868 | 43.40 |
| 2019-20 | 884 | 44.20 |
| 2020-21 | 635 | 31.75 |

| | | |
|---|---|---|
| | | ಶಿವಮೊಗ್ಗ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಪರಿಹಾರ ವಿತರಿಸಲಾದ ಅನುದಾನದ ವಿವರ ಈ ಕೆಳಕಂಡಂತಿವೆ: |

| ವರ್ಷ | ಆತ್ಮಹತ್ಯೆ ಪ್ರಕರಣಗಳು | ಪರಿಹಾರ ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| 2018-19 | 32 | 160.00 |
| 2019-20 | 40 | 200.00 |
| 2020-21 | 30 | 150.00 |

ಸಂಖ್ಯೆ: AGRI-AML/101/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು